RNU AIR DHARWAD

AUGUST 18, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಬಂಗಾಳ ಕೊಲ್ಲಿಯಲ್ಲಿ ವಾಯುಭಾರ** ಕುಸಿತ ಉಂಟಾಗಿರುವ ಹಿನ್ನೆಲೆ, ರಾಜ್ಯದಲ್ಲಿ ಮಳೆ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳಾದ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ನೀಡಲಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಮೂರು ದಿನಗಳಿಂದ ಸುರಿಯುತ್ತಿರುವ ಮಳೆ ಹಿನ್ನೆಲೆ ಜನಜೀವನ ಅಸ್ತವ್ಯಸ್ತಗೊಂಡಿದೆ. ಬೆಳಗಾವಿ, ಕಿತ್ತೂರು, ಬೈಲಹೊಂಗಲ, ಸವದತ್ತಿ ಹಾಗೂ ಖಾನಾಪುರ ತಾಲೂಕುಗಳ ಅಂಗನವಾಡಿ, ಶಾಲಾ, ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿದೆ. ಪಶ್ಚಿಮ ಘಟ್ಟ ಪ್ರದೇಶದಲ್ಲಿ ಧಾರಾಕಾರ ಮಳೆಯಿಂದಾಗಿ ಮಲಪ್ರಭಾ ನದಿ ಮೈದುಂಬಿ ಹರಿಯುತ್ತಿದೆ. ನವಿಲು ತೀರ್ಥ ಜಲಾಶಯ ಭರ್ತಿಯಾಗಿದ್ದು, 4 ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ, ನದಿಪಾತ್ರದ ಜನರು ಮುಂಜಾಗ್ರತೆ ಪಾಲಿಸುವಂತೆ ಜಿಲ್ಲಾಡಳಿತ ಸೂಚಿಸಿದೆ.

<><><>

**ಸತತ ಮಳೆ ಹಿನ್ನೆಲೆ,** ದಾವಣಗೆರೆ ಜಿಲ್ಲೆಯ ಎಲ್ಲ ಶಾಲೆ, ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿದೆ. ಭದ್ರಾ ಜಲಾಶಯದಿಂದ 39 ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದ್ದು, ಹೊನ್ನಾಳಿ, ಹರಿಹರ, ಹರಪನಹಳ್ಳಿ ತಾಲೂಕುಗಳ ನದಿ ಪಾತ್ರದ ಜನರು ಮುಂಜಾಗ್ರತೆ ಪಾಲಿಸುವಂತೆ ಜಿಲ್ಲಾಡಳಿತ ಸೂಚಿಸಿದೆ.

<><><>

**ಯಾದಗಿರಿ ಜಿಲ್ಲೆ ಕೃಷ್ಣಾ ಜಲಾನಯನ** ಪ್ರದೇಶದಲ್ಲಿ ಭಾರಿ ಮಳೆಯಾಗುತ್ತಿರುವ ಹಿನ್ನೆಲೆ, ಹುಣಸಗಿ ತಾಲೂಕಿನ ನದಿ ತೀರದ ಗ್ರಾಮಗಳಲ್ಲಿ ಡಂಗೂರ ಸಾರುವ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಹುಣಸಗಿ ತೆಹಶೀಲ್ದಾರ ಎಂ. ಬಸವರಾಜ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆ ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆ, ಶ್ರೀರಂಗಪಟ್ಟಣ ತಾಲ್ಲೂಕಿನ ಕೃ ್ಣರಾಜಸಾಗರ ಜಲಾಶಯಕ್ಕೆ ನೀರಿನ ಒಳಹರಿವು ಪ್ರಮಾಣ ಹೆಚ್ಚಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಇಂದು ಬೆಳಗ್ಗೆ ಹತ್ತು ಗಂಟೆಯಿಂದ 80 ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಹೊರಬಿಡಲಾಗುತ್ತಿದೆ.

<><><>

**ಹಸಿರುಪಥ ಯೋಜನೆಯಡಿ, ಕಲಬುರಗಿ** ಜಿಲ್ಲೆಯ ರಸ್ತೆ ಇಕ್ಕೆಲಗಳಲ್ಲಿ, ಗಿಡ ನೆಡುವ ಕಾರ್ಯಕ್ರಮ ಪ್ರಗತಿಯಲ್ಲಿದೆ. ಪ್ರಸ್ತುತ ವರ್ಷದಲ್ಲಿ ಒಟ್ಟು 240 ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಸಸಿಗಳನ್ನು ನೆಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ತಿಳಿಸಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಹಸಿರು ಹೊದಿಕೆ ಹೆಚ್ಚಿಸಲು ಹಾಗೂ ಪ್ರಾಕೃತಿಕ ಸುಸ್ಥಿರತೆಗಾಗಿರುವ ಈ ಯೋಜನೆಯನ್ನು, ಪ್ರಸಕ್ತ ವರ್ಷ, ಜೂನ್ 5 ರಂದು ಆರಂಭಿಸಲಾಗಿದೆ ಎಂದಿದ್ದಾರೆ.

<><><>

**ಆತ್ಮನಿರ್ಭರ ಭಾರತ– ಪ್ರಧಾನಮಂತ್ರಿ** ಕಿರು ಆಹಾರ ಉದ್ದಿಮೆಗಳ ನಿಯಬದ್ಧಗೊಳಿಸುವಿಕೆ ಯೋಜನೆ–ಪಿ.ಎಂ.ಎಫ್.ಎಂ.ಇ ಅಡಿ, ಆರ್ಥಿಕ ಧನ ಸಹಾಯ ಪಡೆದು ಮಧ್ಯ ಕರ್ನಾಟಕದಲ್ಲಿ, ಅತಿ ದೊಡ್ಡ ಗಾಣದೆಣ್ಣೆ ಕೇಂದ್ರ ಸ್ಥಾಪಿಸಿ ಯಶಸ್ಸು ಕಂಡಿದ್ದಾರೆ, ಚಿತ್ರದುರ್ಗ ಜಿಲ್ಲೆ ಮೊಣಕಾಲ್ಮೂರಿನ ಡಾಕ್ಟರ್ ಮಂಜುನಾಥ್ ಪಿ.ಎಂ, ಪ್ರದೇಶ ಸಮಾಚಾರಕ್ಕಾಗಿ ಅವರು ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

**ಶ್ರಾವಣ ಮಾಸದ** ಕೊನೆಯ ಸೋಮವಾರವಾದ ಇಂದು, ಉತ್ತರ ಕರ್ನಾಟಕದ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಹುಬ್ಬಳ್ಳಿಯ ಮೂರು ಸಾವಿರ ಮಠದಲ್ಲಿ ಜಾತ್ರಾ ಮಹೋತ್ಸವ ಆಯೋಜಿತವಾಗಿದೆ. ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ, ಪ್ರಲ್ಹಾದ್ ಜೋಶಿ ಅವರು ತಮ್ಮ ಎಕ್ಸ್ ಖಾತೆಯ ಮೂಲಕ ಮಠಕ್ಕೆ ಆಗಮಿಸುವ ಎಲ್ಲ ಭಕ್ತಾದಿಗಳಿಗೆ ಆತ್ಮೀಯ ಸ್ವಾಗತ ಕೋರಿದ್ದು, ಶುಭಾಶಯಗಳನ್ನು ತಿಳಿಸಿದ್ದಾರೆ.

<><><>

**ಉಪ ರಾಷ್ಟ್ರಪತಿ ಹುದ್ದೆಗೆ,** ಸೆಪ್ಟೆಂಬರ್ 9 ರಂದು ಚುನಾವಣೆ ನಡೆಯಲಿದ್ದು, ತೆರವುಗೊಂಡಿರುವ ಉಪರಾಷ್ಟ್ರಪತಿ ಸ್ಥಾನಕ್ಕೆ ಎನ್.ಡಿ.ಎ ಅಭ್ಯರ್ಥಿಯಾಗಿ ಆಯ್ಕೆಗೊಂಡಿರುವ ಮಹಾರಾಷ್ಟ್ರ ರಾಜ್ಯಪಾಲರಾದ ಸಿ.ಪಿ ರಾಧಾಕೃಷ್ಣನ್ ಅವರಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ತಮ್ಮ ಎಕ್ಸ್ ಖಾತೆ ಮೂಲಕ ಅಭಿನಂದನೆ ಸಲ್ಲಿಸಿದ್ದು, ಶುಭ ಹಾರೈಸಿದ್ದಾರೆ.

<><><>

**ರಾಯಚೂರು ನಗರದ ಹೊರವಲಯದ,** ಸುಂಕನೂರ ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ ಅಲ್ಪಸಂಖ್ಯಾತರ ಎಪಿಜೆ ಅಬ್ದುಲ್ ಕಲಾಂ, ಸಿ.ಬಿ.ಎಸ್.ಸಿ ವಸತಿ ಶಾಲೆಯ ಕಾಮಗಾರಿಯನ್ನು ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ.ಕುಮಾರ ನಾಯಕ ಪರಿಶೀಲಿಸಿದರು.

<><><>

**ಹರಳು ರೂಪದ ಯೂರಿಯಾ ಅತಿಯಾದ** ಬಳಕೆಯಿಂದ ಮಣ್ಣಿನ ಫಲವತ್ತತೆ ಕಡಿಮೆಯಾಗುತ್ತದೆ. ನ್ಯಾನೊ ಯೂರಿಯಾ ಬಳಕೆಯಿಂದ ಶೇಕಡ 80 ರ ್ಟು ಇಳುವರಿ ಸಾಧ್ಯ ಎಂದು ಚನ್ನಗಿರಿ ತಾಲೂಕು ಉಪ ಕೃಷಿ ನಿರ್ದೇಶಕ ರೇವಣಸಿದ್ದನಗೌಡ ತಿಳಿಸಿದ್ದಾರೆ. ಚನ್ನಗಿರಿ ತಾಲೂಕಿನ ಅರೇಹಳ್ಳಿ ಗ್ರಾಮದಲ್ಲಿ ಕೃಷಿ ಇಲಾಖೆ ವತಿಯಿಂದ ಆಯೋಜಿಸಲಾದ ಭತ್ತದ ನಾಟಿ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>